# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 1101

ಉತ್ತರ ದಿನಾಂಕ : 22.09.2022

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಶುದ್ಧ ಕುಡಿಯುವ ನೀರು ಪೂರೈಕೆ ಘಟಕಗಳ ಅನುಷ್ಠಾನ ಮತ್ತು ಕಾರ್ಯಾಚರಣೆಯಲ್ಲಿ ಆಗಿರುವ ಲೋಪಗಳು ಸರ್ಕಾರದ ಗಮನಕ್ಕೆ ಬಂದಿದೆಯೇ: | ಶುದ್ಧ ಕುಡಿಯುವ ನೀರು ಪೂರೈಕೆ ಘಟಕಗಳ ಅನುಷ್ಠಾನ ಮತ್ತು ಕಾರ್ಯಾಚರಣೆಯಲ್ಲಿ ಆಗಿರುವ ಲೋಪಗಳು ಸರ್ಕಾರದ ಗಮನಕ್ಕೆ ಬಂದಿದೆ. ಘಟಕಗಳ ಕಾರ್ಯಾಚರಣೆ ಮತ್ತು ನಿರ್ವಹಣೆ ವಹಿಸಿರುವ ಗುತ್ತಿಗೆದಾರರು ಘಟಕಗಳನ್ನು ಸುಸ್ಥಿತಿಯಲ್ಲಿಡಲು ವಿಫಲರಾದರೆ ಅಂತಹ ಗುತ್ತಿಗೆದಾರರ ವಿರುದ್ಧ ಟೆಂಡರ್ ಕರಾರಿನನ್ವಯ ಗುತ್ತಿಗೆ ರದ್ದುಪಡಿಸಿ, ಇತರೆ ಗುತ್ತಿಗೆದಾರರಿಂದ ಮುಂದಿನ ನಿರ್ವಹಣೆಗೆ ಕ್ರಮ ಜರುಗಿಸಲಾಗುತ್ತಿದೆ. |
| ಆ) | ಶಿವಮೊಗ್ಗ ಜಿಲ್ಲೆಯಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯಾಚರಣೆ ಮಾಡುತ್ತಿವೆ: | ಶಿವಮೊಗ್ಗ ಜಿಲ್ಲೆಯಲ್ಲಿ ಒಟ್ಟು 255 ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯಾಚರಣೆ ಮಾಡುತ್ತಿವೆ. |
| ಇ) | ಇದರ ವಿದ್ಯುತ್ ಬಿಲ್ ಪಾವತಿ ಬಾಕಿ ಎಷ್ಟಿದೆ: ಬಾಕಿಯನ್ನು ಸರ್ಕಾರ ಮನ್ನಾ ಮಾಡುತ್ತಿದೆಯೇ: | ಶಿವಮೊಗ್ಗ ಜಿಲ್ಲೆಯಲ್ಲಿ ಒಟ್ಟು 255 ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯಾಚರಣೆ ಮಾಡುತ್ತಿದ್ದು ಕೆ.ಆರ್.ಐ.ಡಿ.ಎಲ್ ಇಲಾಖೆಯಿಂದ ಅನುಷ್ಠಾನಗೊಳಿಸಿರುವ 89 ಘಟಕಗಳು ಕಾಯಾಚರಣೆ & ನಿರ್ವಹಣೆ ಅವಧಿ ಮುಕ್ತಾಯಗೊಂಡ ನಂತರ ಗ್ರಾಮ ಪಂಚಾಯತಿಯವರಿಂದ ನಿರ್ವಹಣೆಯಾದ ಅವಧಿಗೆ ವಿದ್ಯುತ್ ಬಿಲ್ ಬಾಕಿ ರೂ.2,25,964.00 ಗಳು ಇರುತ್ತದೆ. ಸರ್ಕಾರವು ವಿದ್ಯುತ್ ಬಾಕಿಯನ್ನು ಮನ್ನಾ ಮಾಡಿರುವುದಿಲ್ಲ. |

ಸಂ:ಗ್ರಾಕುನೀ&ನೈಇ 465 ಗ್ರಾನೀಸ(4)2022

(ಬಸವರಾಜ ಬೊಮ್ಮಾಯಿ)

ಮುಖ್ಯಮಂತ್ರಿ